**ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ., ನ್ಯಾಯಾಲಯ, ನವಲಗುಂದ.**

| | |
|---|---|
| ಸಿ.ಸಿ. ನಂಬರ್ | : 610/2024 |
| ಸಿ.ಡಬ್ಲ್ಯೂ | : 08 |
| ಪಿ.ಡಬ್ಲ್ಯೂ | : 02 |
| ಸಾಕ್ಷಿಯ ಹೆಸರು | : ಮಲ್ಲಪ್ಪ ಚೆನ್ನಪ್ಪ ಕುಂದಗೋಳ |
| ವಯಸ್ಸು | : 37 ವರ್ಷ |
| ಉದ್ಯೋಗ | : ಅಬಕಾರಿ ನಿರೀಕ್ಷಕರು, ಅಬಕಾರಿ ಅಧೀಕ್ಷಕರ ಕಚೇರಿ,ಬೆಂಗಳೂರು |
| ವಾಸ ಸ್ಥಳ | : ಬೆಂಗಳೂರು |

ದಿನಾಂಕಃ 28/11/2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ-**

ನಾನು 25-11-2020 ರಿಂದ 25-09-2025 ವರೆಗೆ ಅಬಕಾರಿ ನಿರೀಕ್ಷಕರು ಎಂದು ಅಬಕಾರಿ ಉಪಅಧೀಕ್ಷಕರ ಕಚೇರಿ, ಧಾರವಾಡ ನಲ್ಲಿಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 11-06-2021 ರಂದು ಪ್ರಕರಣದ ಕಡತವನ್ನು ಚಾಸಾ-1 ರವರಿಂದ ಪಡೆದುಕೊಂಡು ದಿನಾಂಕಃ 21-06-2021 ರಂದು ಜಪ್ತಾದ ಮುದ್ದೆ ಮಾಲನ್ನು ಚಾಸಾ-6 ರವರ ಮುಖಾಂತರ ರಾಸಾಯನಿಕ ಪರೀಕ್ಷೆಗೆ ಕಳುಹಿಸಿರುತ್ತೇನೆ. ಸದರಿ ದಿನ ಆರ್ ಟಿ ಓ, ಧಾರವಾಡ ರವರಿಗೆ ವಾಹನದ ಮಾಲೀಕತ್ವ ಕೋರಿ ಪತ್ರ ಬರೆದಿರುತ್ತೇನೆ ಹಾಗೂ ಸದರಿ ದಿನ ಸದರಿಯವರಿಂದ ವರದಿ ಪಡೆದುಕೊಂಡಿರುತ್ತೇನೆ. ದಿಃ 07-07-2021 ರಂದು ಚಾಸಾ-7 ರವರಿಂದ ರಾಸಾಯನಿಕ ಪರೀಕ್ಷೆ ವರದಿಯನ್ನು ಪಡೆದುಕೊಂಡಿರುತ್ತೇನೆ. ದಿನಾಂಕಃ 19-07-2021 ರಂದು ಆರೋಪಿಗೆ ನೋಟಿಸನ್ನು ನೀಡಿರುತ್ತೇನೆ. ನಂತರ ಸದರಿಯವರು ದಿನಾಂಕಃ 04-08-2021 ರಂದು ನೋಟಿಸಗೆ ಹೇಳಿಕೆ ನೀಡಿರುತ್ತಾರೆ. ನಂತರ ಆರೋಪಿಯ ವಿರುದ್ದ ದೋಷಾರೋಪಣ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

ರಾಸಾಯನಿಕ ಪರೀಕ್ಷಾ ವರದಿಯನ್ನು ನೋಡಿ ಗುರುತಿಸಿದ್ದು **ನಿಪಿ-2** ಹಾಗೂ ಎಂದು ಗುರುತಿಸಲಾಯಿತು. ವಾಹನದ ಬಿ ಉತಾರವನ್ನು **ನಿಪಿ-3** ಎಂದು ಗುರುತಿಸಲಾಯಿತು. ಆರೋಪಿಗೆ ನೀಡಿದ ನೋಡಿ **ನಿಪಿ-4** ಹಾಗೂ ಸಾಕ್ಷಿಯ ಸಹಿಯನ್ನು **ನಿಪಿ-4(ಎ)** ಎಂದು ಗುರುತಿಸಲಾಯಿತು.

ಸಾಕ್ಷಿಯು ನ್ಯಾಯಾಲಯದ ಮುದ್ದೆ ಮಾಲನ್ನು ನೋಡಿ ಗುರುತಿಸಿರುತ್ತಾರೆ. ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ.

**ಪಾಟೀ ಸವಾಲುಃ ಶ್ರೀ ಆರ್ ಎಂ ಆರ್ ವಕೀಲರಿಂದ**

ನಾನು ಘಟನಾ ಸ್ಥಳಕ್ಕೆ ಹೋಗಿರುವದಿಲ್ಲ. ಸಾಕ್ಷಿದಾರರ ಹೇಳಿಕೆಗಳನ್ನು ಠಾಣೆಯಲ್ಲಿ ಪಡೆದುಕೊಂಡಿರುತ್ತೇನೆ. ಮೇಲಾಧಿಕಾರಿಯ ಮಾತು ಕೇಳಿ ಸುಳ್ಳು ಪ್ರಕರಣ ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿದಾರರ ಹೇಳಿಕೆಗಳನ್ನು ಸೃಷ್ಟಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗೆ ತೊಂದರೆ ಕೊಡಲು ಹಾಗೂ ಅಂಕಿ-ಸಂಖ್ಯೆಗೋಸ್ಕರ ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

**ಓ. ಹೇ. ಕೇ. ಸರಿ. ಇದೆ.**

**Sd/-**

**ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ**

**ನವಲಗುಂದ.**